ಕರ್ನಾಟಕ ಸರ್ಕಾರ

**ಸಾರ್ವಜನಿಕ ಶಿಕ್ಷಣ ಇಲಾಖೆಯ, ಆಯುಕ್ತರ ಕಛೇರಿ, ನೃಪತುಂಗರಸ್ತೆ, ಬೆಂಗಳೂರು-560001**

ಸಂಖ್ಯೆ: ಸಿ7(1)ಪ್ರಾಶಿಅ/1-5/ಆಂ.ಮಾ.ಪ/ಭಾಗ-03(ರಾ)/2015-16 ದಿನಾಂಕ : 05/10/2015

-:ಜ್ಞಾ ಪ ನಾ:-

**ವಿಷಯ** : ಘನ ಸರ್ವೋಚ್ಚ ನ್ಯಾಯಾಲಯದ ಹಾಗೂ ರಾಜ್ಯ ಉಚ್ಚ ನ್ಯಾಯಾಲಯದ ತೀರ್ಪಿನನ್ವಯ, 1994 ರ ನಂತರ ಪ್ರಾರಂಭಗೊಂಡ ಕನ್ನಡ ಮಾಧ್ಯಮದ/ಇತರೆ ಮಾಧ್ಯಮ ಶಾಲೆಗಳಿಗೆ ಆಂಗ್ಲ ಮಾಧ್ಯಮದ ಬೋಧನೆಗೆ ಅವಕಾಶ ಕೋರಿದ್ದ ಪ್ರಕರಣಗಳಲ್ಲಿ, **ರಾಮನಗರ** ಜಿಲ್ಲೆಗೆ ಸಂಬಂಧಪಟ್ಟಂತೆ, 2015-16 ನೇ ಸಾಲಿನಿಂದ 1-5 ನೇ ತರಗತಿ ಆಂಗ್ಲ ಮಾಧ್ಯಮ ಬೋಧನೆಗೆ ಪರಿವರ್ತನೆ ನೀಡುವ ಬಗ್ಗೆ.

ಉಲ್ಲೇಖ :
1. ಮಾನ್ಯ ಸರ್ವೋಚ್ಚ ನ್ಯಾಯಾಲಯದಲ್ಲಿ ರಾಜ್ಯ ಸರ್ಕಾರವು ಸಲ್ಲಿಸಿದ್ದ ಎಸ್.ಎಲ್.ಪಿ. 18139-18163/2008 ಅನ್ನು ಸಿವಿಲ್ ಅಪೀಲ್ ಎಂದು ಪರಿಗಣಿಸಿ ಸಂವಿಧಾನ ಪೀಠಕ್ಕೆ ವರ್ಗಾವಣೆಗೊಂಡ ತರುವಾಯದಲ್ಲಿ ದಿನಾಂಕ : 06-05-2014 ರಲ್ಲಿ ಹೊರಟಿರುವ ತೀರ್ಪು.
2. ದಿನಾಂಕ : 06.05.2014 ರ ತೀರ್ಪಿನ ಕುರಿತು ಸಲ್ಲಿಸಲಾಗಿದ್ದ ಮರು ಪರಿಶೀಲನಾ ಅರ್ಜಿ ಸಂಖ್ಯೆ: 1878-1911/2014 ರಲ್ಲಿ ದಿ: 09.09.2014 ರಂದು ವಜಾ ಆದೇಶ. ನಂತರದಲ್ಲಿ ರಾಜ್ಯ ಸರ್ಕಾರ ದಾಖಲಿಸಿದ್ದ ಪರಿಹಾರಾತ್ಮಕ ಅರ್ಜಿಯ (Curative Petition) ಆದೇಶ.
3. ಸರ್ಕಾರದ ಅರೆ ಸ.ಪ.ಇಡಿ.263.ಪಿಜಿಸಿ.2015, ದಿನಾಂಕ:2-6-2015.
4. ಏಕ ಕಡತದಲ್ಲಿನ ಸರ್ಕಾರದ ಆದೇಶ ದಿನಾಂಕ:6-6-2015.
5. ಏಕ ಕಡತದಲ್ಲಿನ ಸರ್ಕಾರದ ಸುತ್ತೋಲೆ ಸಂಖ್ಯೆ:ಇಡಿ.359.ಪಿಜಿಸಿ.2015, ದಿನಾಂಕ : 05-9-2015.
6. ಉಪನಿರ್ದೇಶಕರು ಸಾರ್ವಜನಿಕ ಶಿಕ್ಷಣ ಇಲಾಖೆ **ರಾಮನಗರ** ಜಿಲ್ಲೆಯವರು ನೀಡಿರುವ ವಿವಿಧ ದಿನಾಂಕದ ಪ್ರಸ್ತಾವನೆಗಳು

&&&&&

1994-95 ರಲ್ಲಿ ಜಾರಿಗೊಳಿಸಲಾದ ಭಾಷಾ ನೀತಿ ಕುರಿತಂತೆ ಹಲವು ಸಂಸ್ಥೆಗಳು ಮೊದಲಿಗೆ ರಾಜ್ಯ ಉಚ್ಚ ನ್ಯಾಯಾಲಯದಲ್ಲಿ ಪ್ರಕರಣವನ್ನು ದಾಖಲಿಸಿದ ರಿಟ್ ಅರ್ಜಿಯಲ್ಲಿ 2008ರಲ್ಲಿ ತೀರ್ಪು ಹೊರಬಿದ್ದು ನಂತರ ಸರ್ಕಾರವು ಘನ ಸರ್ವೋಚ್ಛ ನ್ಯಾಯಾಲಯದಲ್ಲಿ ವಿಶೇಷ ರಜಾ ಅರ್ಜಿಯನ್ನು ದಾಖಲಿಸಿ ಅಂತಿಮವಾಗಿ ದಿನಾಂಕ : 06--05-2014 ರಲ್ಲಿ ಘನ ಸರ್ವೋಚ್ಛ ನ್ಯಾಯಾಲಯದ ಸಂವಿಧಾನದ ಪೀಠವು ತೀರ್ಪು ನೀಡಿದ ಮತ್ತು ಕರ್ನಾಟಕ ರಾಜ್ಯ ಘನ ಉಚ್ಚ ನ್ಯಾಯಾಲಯ ಕೆಲವು ಪ್ರಕರಣಗಳಲ್ಲಿ, ನಿಂದನಾ ದಾವೆಯು ಸೇರಿದಂತೆ ಸರ್ವೋಚ್ಚ ನ್ಯಾಯಾಲಯದ ಆದೇಶವನ್ನು ಅನುಷ್ಠಾನಗೊಳಿಸುವಂತೆ ಆದೇಶಿಸಿದೆ. ಈ ಹಿನ್ನಲೆಯಲ್ಲಿ 01 ರಿಂದ 5ನೇ ತರಗತಿಗೆ ಆಂಗ್ಲ ಮಾಧ್ಯಮದ ಪರಿವರ್ತನೆಗೆ ಸರ್ಕಾರವು ಉಲ್ಲೇಖ-3 ಮತ್ತು 4, 5 ರಲ್ಲಿ ಅನುಮತಿ ನೀಡಿರುತ್ತದೆ.

ಉಲ್ಲೇಖ-(06) ರಲ್ಲಿ ಉಪ ನಿರ್ದೇಶಕರು **ರಾಮನಗರ** ಜಿಲ್ಲೆ ಇವರಿಂದ ಬಂದಿರುವ ಪ್ರಸ್ತಾವನೆಗಳಲ್ಲಿ ಸದರಿ ಶಾಲೆಗಳು 01 ರಿಂದ 5ನೇ ತರಗತಿಯವರೆಗೆ ಶಾಲೆಯು ಪ್ರಾರಂಭವಾದಾಗಿನಿಂದ ನಿರಂತರವಾಗಿ ನಡೆಯುತ್ತಿದ್ದು, ಕನ್ನಡ ಮಾಧ್ಯಮದಿಂದ ಆಂಗ್ಲ ಮಾಧ್ಯಮಕ್ಕೆ ಪರಿವರ್ತನೆ ನೀಡಬಹುದೆಂದು ಉಪ ನಿರ್ದೇಶಕರು

ಅಭಿಪ್ರಾಯಿಸಿದ್ದಾರೆ. ಸದರಿಯವರ ಅಭಿಪ್ರಾಯ ಮತ್ತು ಉಲ್ಲೇಖದಲ್ಲಿನ ಸರ್ಕಾರದ ಆದೇಶಗಳಂತೆ, ಕೆಳಕಂಡ **60** ಶಾಲೆಗಳಿಗೆ 2015-16ನೇ ಶೈಕ್ಷಣಿಕ ಸಾಲಿನಿಂದ 01 ರಿಂದ 5ನೇ ತರಗತಿಗಳಲ್ಲಿ ಆಂಗ್ಲ ಮಾಧ್ಯಮದಲ್ಲಿ ಬೋಧಿಸಲು ಕೆಳಗಿನ ಷರತ್ತುಗಳಿಗೊಳಪಟ್ಟು ಅನುಮತಿ ನೀಡಿ ಆದೇಶಿಸಿದೆ.

1. ಎಲ್ಲಾ ಸಂಸ್ಥೆಗಳಿಂದ ಕರ್ನಾಟಕ ಶಿಕ್ಷಣ ಕಾಯ್ದೆ ನಿಯಮಾವಳಿಗಳನ್ವಯ ನಮೂನೆ-3 ರಲ್ಲಿ ಅಗತ್ಯ ವಿವರಗಳನ್ನು ನಮೂದಿಸಿ 01 ರಿಂದ 5ನೇ ತರಗತಿ ಕನ್ನಡ ಮಾಧ್ಯಮದ ತರಗತಿಗಳನ್ನು ನಡೆಸಲು ವಿತರಿಸಲಾಗಿದ್ದ ಮೂಲ ನೋಂದಣಿ ಪ್ರಮಾಣ ಪತ್ರವನ್ನು ಉಪನಿರ್ದೇಶಕರು 15 ದಿನಗಳೊಳಗೆ ಪಡೆದು ಸಲ್ಲಿಸಿದ ನಂತರದಲ್ಲಿ ನಮೂನೆ-4 ರಲ್ಲಿ ಆಂಗ್ಲ ಮಾಧ್ಯಮಕ್ಕೆ ಪರಿಷ್ಕೃತ ನೋಂದಣಿ ಪ್ರಮಾಣ ಪತ್ರವನ್ನು ವಿತರಿಸಲಾಗುವುದು.
2. ಕ್ಷೇತ್ರ ಶಿಕ್ಷಣಾಧಿಕಾರಿಗಳು/ ಉಪನಿರ್ದೇಶಕರು ಶಿಫಾರಸ್ಸು ಮಾಡಿ ದೃಢೀಕರಿಸಿ ಸಲ್ಲಿಸಿರುವ ವರದಿ ಮತ್ತು ದಾಖಲೆಗಳ ಆಧಾರದ ಮೇಲೆ ಅನುಮತಿಯನ್ನು ನೀಡಲಾಗಿದೆ.
3. ಕರ್ನಾಟಕ ಶಿಕ್ಷಣ ಕಾಯ್ದೆ ನಿಯಮಾವಳಿಗಳು ಹಾಗೂ ಕಾಲದಿಂದ ಕಾಲಕ್ಕೆ ಹೊರಡಿಸಲಾಗಿರುವ ಆದೇಶ/ ಸುತ್ತೋಲೆಗಳಂತೆ ಕ್ರಮಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.
4. ಕಡ್ಡಾಯ ಶಿಕ್ಷಣ ಕಾಯ್ದೆ ನಿಯಮಗಳು ಜಾರಿಯಲ್ಲಿದೆ. ಅದರಂತೆ ಅಗತ್ಯವಿರುವ ಎಲ್ಲಾ ಸೌಲಭ್ಯಗಳನ್ನು ಹಾಗೂ ಗುಣಾತ್ಮಕ ಶಿಕ್ಷಣವನ್ನು ಒದಗಿಸತಕ್ಕದ್ದು.
5. ಜಾರಿಯಲ್ಲಿರುವ ಶುಲ್ಕದ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.
6. ಮೂಲಭೂತ ಸೌಲಭ್ಯಗಳ ಕೊರತೆಯನ್ನು ಸಂಸ್ಥೆಯು ಮುಂದಿನ ದಿನಗಳಲ್ಲಿ ಸರಿಪಡಿಸಿಕೊಳ್ಳತಕ್ಕದ್ದು ಹಾಗೂ ಮೂಲಭೂತ ಸೌಲಭ್ಯಗಳ ಬಗ್ಗೆ ಪರಿಶೀಲಿಸಲಾಗುವುದು.
7. ಸಂಸ್ಥೆಯ ಯಾವುದೇ ದಾಖಲೆಗಳ ನೈಜತೆಯ ಬಗ್ಗೆ ವ್ಯತಿರಿಕ್ತ ವರದಿ ಸಲ್ಲಿಕೆಯಾದ ಪ್ರಸಂಗದಲ್ಲಿ ತಪ್ಪು ಮಾಹಿತಿ ಸಲ್ಲಿಕೆಯಾಗಿರುವುದು ಗಮನಕ್ಕೆ ಬಂದಲ್ಲಿ, ತಕ್ಷಣವೆ ಏಕಪಕ್ಷೀಯವಾಗಿ ಹಾಗೂ ಯಾವುದೇ ಸಮಜಾಯಿಷಿಗೆ ಅವಕಾಶ ನೀಡದೇ ಪ್ರಸ್ತುತ ಅನುಮತಿಯನ್ನು ಹಿಂಪಡೆಯುವ ಅಧಿಕಾರವನ್ನು ಕಾಯ್ದಿರಿಸಿಕೊಳ್ಳಲಾಗಿದೆ.
8. ಉಪ ನಿರ್ದೇಶಕರು ಪರಿವರ್ತನೆಯನ್ನು ಪರಿಗಣಿಸಿ ಅಗತ್ಯ ಕ್ರಮಗಳನ್ನು ನಿಯಮಾನುಸಾರ ಕೈಗೊಳ್ಳತಕ್ಕದ್ದು.

| ಕ್ರ ಸಂ | ಶಾಲೆಯ ಹೆಸರು ಮತ್ತು ವಿಳಾಸ |
|---|---|
| 01 | ನೆಹರು ಪಬ್ಲಿಕ್ ಶಾಲೆ, ಬನ್ನಿಕುಪ್ಪೆ, (ಕೈಲಾಂಚ), ರಾಮನಗರ ತಾಲ್ಲೂಕು, ರಾಮನಗರ ಜಿಲ್ಲೆ. |
| 02 | ಗ್ರೀನ್‌ಫೀಲ್ಡ್ ಸ್ಕೂಲ್, ವಿಜಯನಗರ, ರಾಮನಗರ ಟೌನ್ |
| 03 | ಹುದಾ ನ್ಯಾಷನಲ್ ಪಬ್ಲಿಕ್ ಸ್ಕೂಲ್, ಮೆಹಬೂಬ್‌ನಗರ, ರಾಮನಗರ ಟೌನ್ |
| 04 | ಸ್ಟ್ರಾಬೆರಿ ಇಂಟರ್ ನ್ಯಾಷನಲ್ ಸ್ಕೂಲ್, ಜಯಪುರಗೇಟ್, ಜಾಲಮಂಗಲ ರಸ್ತೆ, ರಾಮನಗರ ತಾಲ್ಲೂಕು, ರಾಮನಗರ ಜಿಲ್ಲೆ. |
| 05 | ಸೋನಾ ವಳ್ಳಿಯಪ್ಪ ಪಬ್ಲಿಕ್ ಸ್ಕೂಲ್, ಹೆಜ್ಜಾಲ, ರಾಮನಗರ ತಾಲ್ಲೂಕು, ರಾಮನಗರ ಜಿಲ್ಲೆ. |
| 06 | ಇಖ್ರಾ ಪಬ್ಲಿಕ್ ಸ್ಕೂಲ್, ಜೀಯಾವುಲ್ಲಾ ಬ್ಲಾಕ್, ಮೆಹಬೂಬ್‌ನಗರ, ರಾಮನಗರ ಟೌನ್. |
| 07 | ಆದರ್ಶ ವಿದ್ಯಾಲಯ, ಹನುಮಗಿರಿ, ಮಾನಮಾನಹಳ್ಳಿ, ರಾಮನಗರ ತಾಲ್ಲೂಕು, ರಾಮನಗರ ಜಿಲ್ಲೆ. |
| 08 | ಎಂ.ಇ.ಎಸ್. ಇಲಾಯಿ ಪಬ್ಲಿಕ್ ಸ್ಕೂಲ್, ಯಾರಬ್‌ನಗರ, ರಾಮನಗರ ಟೌನ್ |
| 09 | ಜಾಮೀ ಉಲ್ ಉಲುಂ ರೆಸಿಡೆನ್ಸಿಯಲ್ ಸ್ಕೂಲ್, ಬನ್ನಿಕುಪ್ಪೆ (ಬಿಡದಿ), ರಾಮನಗರ ತಾಲ್ಲೂಕು, ರಾಮನಗರ ಜಿಲ್ಲೆ. |
| 10 | ಲೂರ್ದ ಪಬ್ಲಿಕ್ ಸ್ಕೂಲ್, ಲೂರ್ದು ಮಾತಾ ದೇವಾಲಯ, ರಾಮನಗರ ಟೌನ್. |

| | |
|---|---|
| 11 | ಆಕ್ಸ್‌ಫರ್ಡ ಪಬ್ಲಿಕ್ ಸ್ಕೂಲ್, ವಿಜಯನಗರ, ರಾಮನಗರ ಟೌನ್ |
| 12 | ಯೂನಿವರ್ಸಲ್ ಪಬ್ಲಿಕ್ ಶಾಲೆ, ಅರ್ಚಕರಹಳ್ಳಿ, ರಾಮನಗರ ತಾಲ್ಲೂಕು, ರಾಮನಗರ ಜಿಲ್ಲೆ. |
| 13 | ನ್ಯಾಷನಲ್ ಪಬ್ಲಿಕ್ ಸ್ಕೂಲ್, ಹುಲಿಕಟ್ಟೆ, ಮಾಗಡಿ ತಾಲ್ಲೂಕು, ರಾಮನಗರ ಜಿಲ್ಲೆ. |
| 14 | ಮಹಾಲಿಂಗೇಶ್ವರ ಪಬ್ಲಿಕ್ ಸ್ಕೂಲ್, ಕೆ.ಬಿ.ಮಠ, ಮಾಗಡಿ ತಾಲ್ಲೂಕು, ರಾಮನಗರ ಜಿಲ್ಲೆ. |
| 15 | ಮಾನಸ ಗಂಗೋತ್ರಿ ಸ್ಕೂಲ್, ಹುಲಿಕಲ್, ಮಾಗಡಿ ತಾಲ್ಲೂಕು, ರಾಮನಗರ ಜಿಲ್ಲೆ. |
| 16 | ವಿವೇಕಾನಂದ ವಿದ್ಯಾಪೀಠ, ಕುದೂರು, ಮಾಗಡಿ ತಾಲ್ಲೂಕು, ರಾಮನಗರ ಜಿಲ್ಲೆ. |
| 17 | ಮಹಾಂತೇಶ್ವರ ಸ್ಕೂಲ್, ಕುದೂರು, ಮಾಗಡಿ ತಾಲ್ಲೂಕು, ರಾಮನಗರ ಜಿಲ್ಲೆ. |
| 18 | ಜೋಸೆಫ್ ಪಬ್ಲಿಕ್ ಸ್ಕೂಲ್, ಮಾಗಡಿ ಟೌನ್, ರಾಮನಗರ ಜಿಲ್ಲೆ. |
| 19 | ಬಾಲಾಜಿ ನ್ಯಾಷನಲ್ ಪಬ್ಲಿಕ್ ಸ್ಕೂಲ್, ಬೈಚಾಪುರ, ಮಾಗಡಿ ತಾಲ್ಲೂಕು, ರಾಮನಗರ ಜಿಲ್ಲೆ. |
| 20 | ಸ್ಪೆಕ್ಟ್ರ ಇಂಟರ್‌ನ್ಯಾಷನಲ್ ಸ್ಕೂಲ್, ಎಣ್ಣೆಗೆರೆ, ಮಾಗಡಿ ತಾಲ್ಲೂಕು, ರಾಮನಗರ ಜಿಲ್ಲೆ. |
| 21 | ಪಾರಂಗ ಪ್ರಾಥಮಿಕ ಶಾಲೆ, ತೋರೆಪಾಳ್ಯ, ಮಾಗಡಿ ತಾಲ್ಲೂಕು, ರಾಮನಗರ ಜಿಲ್ಲೆ. |
| 22 | ಪ್ರೊ. ಕೆ.ವಿ.ಜಿ ವಿದ್ಯಾಸಂಸ್ಥೆ, ಭೈರಾಪಟ್ಟಣ, ಚನ್ನಪಟ್ಟಣ ತಾಲ್ಲೂಕು, ರಾಮನಗರ ಜಿಲ್ಲೆ. |
| 23 | ವೆಬ್‌ಸ್ಟಾರ್ ಇಂಟರ್ ನ್ಯಾಷನಲ್ ಪಬ್ಲಿಕ್ ಶಾಲೆ, ಚನ್ನಪಟ್ಟಣ ಟೌನ್, ರಾಮನಗರ ಜಿಲ್ಲೆ. |
| 24 | ಬಿ.ಜೆ.ಎಲ್. ಶಾಲೆ, ಚನ್ನಪಟ್ಟಣ ತಾಲ್ಲೂಕು, ರಾಮನಗರ ಜಿಲ್ಲೆ. |
| 25 | ರೋಟರಿ ಶಾಲೆ, ಚನ್ನಪಟ್ಟಣ ಟೌನ್, ರಾಮನಗರ ಜಿಲ್ಲೆ. |
| 26 | ನಿಸರ್ಗ ಪಬ್ಲಿಕ್ ಶಾಲೆ, ಮುದಗೆರೆ, ಚನ್ನಪಟ್ಟಣ ತಾಲ್ಲೂಕು, ರಾಮನಗರ ಜಿಲ್ಲೆ. |
| 27 | ಬ್ರೈಟ್ ಎಜುಕೇಷನ್ ಶಾಲೆ, ಮಲ್ಲಯ್ಯನದೊಡ್ಡಿ, ಚನ್ನಪಟ್ಟಣ ತಾಲ್ಲೂಕು, ರಾಮನಗರ ಜಿಲ್ಲೆ. |
| 28 | ಆಕ್ಸ್‌ಫರ್ಡ ಇಂಟರ್ ನ್ಯಾಷನಲ್ ಪಬ್ಲಿಕ್ ಶಾಲೆ, ವಂದಾರಗುಪ್ಪೆ, ಚನ್ನಪಟ್ಟಣ ತಾಲ್ಲೂಕು, ರಾಮನಗರ ಜಿಲ್ಲೆ. |
| 29 | ಸಾಧನ ವಿದ್ಯಾಲಯ, ಶ್ರೀರಾಮಪುರಿ, ಕಣ್ವ, ಚನ್ನಪಟ್ಟಣ ತಾಲ್ಲೂಕು, ರಾಮನಗರ ಜಿಲ್ಲೆ. |
| 30 | ಸದ್ವಿವಿದ್ಯಾ ಪ್ರಾಥಮಿಕ ಶಾಲೆ, ಅಕ್ಕೂರು, ಚನ್ನಪಟ್ಟಣ ತಾಲ್ಲೂಕು, ರಾಮನಗರ ಜಿಲ್ಲೆ. |
| 31 | ಹಾರಿಜಾನ್ ಲೇಕ್ ವ್ಯೂ ಪಬ್ಲಿಕ್ ಶಾಲೆ, ವಂದಾರಗುಪ್ಪೆ, ಚನ್ನಪಟ್ಟಣ ತಾಲ್ಲೂಕು, ರಾಮನಗರ ಜಿಲ್ಲೆ. |
| 32 | ದಯಾನಂದ ವಿದ್ಯಾ ಸಂಸ್ಥೆ, ನ್ಯೂ ಆಕ್ಸ್‌ಫರ್ಡ್ ಪಬ್ಲಿಕ್ ಸ್ಕೂಲ್, ಕೋಡಂಬಳ್ಳಿ, ಚನ್ನಪಟ್ಟಣ ತಾಲ್ಲೂಕು, ರಾಮನಗರ ಜಿಲ್ಲೆ. |
| 33 | ಡಾ॥ ಶಾಂತಮರಿಯಪ್ಪ ಕಾನ್ವೆಂಟ್, ಅವ್ವೇರಹಳ್ಳಿ, ಚನ್ನಪಟ್ಟಣ ತಾಲ್ಲೂಕು, ರಾಮನಗರ ಜಿಲ್ಲೆ. |
| 34 | ಸಾರ್ವಜನಿಕ ವಿದ್ಯಾ ಸಂಸ್ಥೆ, ಇಗ್ಗಲೂರು, ಚನ್ನಪಟ್ಟಣ ತಾಲ್ಲೂಕು, ರಾಮನಗರ ಜಿಲ್ಲೆ. |
| 35 | ಬಿ.ಜಿ.ಎಸ್. ಗಾರ್ಡನ್ ಶಾಲೆ, ಜೆ.ಬ್ಯಾಡರಹಳ್ಳಿ, ಚನ್ನಪಟ್ಟಣ ತಾಲ್ಲೂಕು, ರಾಮನಗರ ಜಿಲ್ಲೆ. |
| 36 | ಸಿದ್ದರಾಮೇಶ್ವರ ಪ್ರಾಥಮಿಕ ಶಾಲೆ, ಬೇವೂರು, ಚನ್ನಪಟ್ಟಣ ತಾಲ್ಲೂಕು, ರಾಮನಗರ ಜಿಲ್ಲೆ. |
| 37 | ಸೆಂಟ್ ಥೆರೇಸಾ ಕಾನ್ವೆಂಟ್, ಚನ್ನಪಟ್ಟಣ ತಾಲ್ಲೂಕು, ರಾಮನಗರ ಜಿಲ್ಲೆ. |
| 38 | ಹಯಾತ್ ಹಬೀಬ್ ಉರ್ದು ಪ್ರಾಥಮಿಕ ಶಾಲೆ, ಚನ್ನಪಟ್ಟಣ ತಾಲ್ಲೂಕು, ರಾಮನಗರ ಜಿಲ್ಲೆ. |
| 39 | ನ್ಯೂ ಇಂಡಿಯನ್ ಕಿರಿಯ ಪ್ರಾಥಮಿಕ ಶಾಲೆ, ಬೃಂದಾವನ ನಗರ, ಕನಕಪುರ ತಾಲ್ಲೂಕು, ರಾಮನಗರ ಜಿಲ್ಲೆ. |
| 40 | ಇಂಡಿಯನ್ ಶಾಲೆ, ಮುತ್ತೇನಸರಪ್ಪ ಬೀದಿ, ಪೇಟೆ, ಕನಕಪುರ ತಾಲ್ಲೂಕು, ರಾಮನಗರ ಜಿಲ್ಲೆ. |
| 41 | ರಾಘವೇಂದ್ರ ಹಿರಿಯ ಪ್ರಾಥಮಿಕ ಶಾಲೆ, ಬೆಂಗಳೂರು ರಸ್ತೆ, ಕನಕಪುರ ಟೌನ್, ರಾಮನಗರ ಜಿಲ್ಲೆ. |
| 42 | ಕಸ್ತೂರಬಾ ಹಿರಿಯ ಪ್ರಾಥಮಿಕ ಶಾಲೆ, ಹಾರೋಹಳ್ಳಿ ಕನಕಪುರ ತಾಲ್ಲೂಕು, ರಾಮನಗರ ಜಿಲ್ಲೆ. |

| | |
|---|---|
| 43 | ಬೆನಕ ಹಿರಿಯ ಪ್ರಾಥಮಿಕ ಶಾಲೆ, ಕೆಂಕೇರಮಮ್ಮ ದೇವಸ್ಥಾನದ ರಸ್ತೆ, ಕನಕಪುರ ತಾಲ್ಲೂಕು, ರಾಮನಗರ ಜಿಲ್ಲೆ. |
| 44 | ನೇತಾಜಿ ಇಂಟರ್‌ನ್ಯಾಷನಲ್ ಪ್ರಾಥಮಿಕ ಶಾಲೆ, ರಾಜಾರಾವ್ ರಸ್ತೆ, ಕನಕಪುರ ತಾಲ್ಲೂಕು, ರಾಮನಗರ ಜಿಲ್ಲೆ. |
| 45 | ಸೆಂಟ್ ಆನ್ಸ್ ಕಾನ್ವೆಂಟ್, ದೊಡ್ಡಆಲಹಳ್ಳಿ, ಕನಕಪುರ ತಾಲ್ಲೂಕು, ರಾಮನಗರ ಜಿಲ್ಲೆ. |
| 46 | ಶಾಂತಿನಿಕೇತನ ಹಿರಿಯ ಪ್ರಾಥಮಿಕ ಶಾಲೆ, ಹುಣಸಣಹಳ್ಳಿ, ಕನಕಪುರ ತಾಲ್ಲೂಕು, ರಾಮನಗರ ಜಿಲ್ಲೆ |
| 47 | ಮಾಡ್ರನ್ ಆಂಗ್ಲ ಹಿರಿಯ ಪ್ರಾಥಮಿಕ ಶಾಲೆ, ಹಾರೋಹಳ್ಳಿ, ಕನಕಪುರ ತಾಲ್ಲೂಕು, ರಾಮನಗರ ಜಿಲ್ಲೆ |
| 48 | ಜ್ಞಾನಜ್ಯೋತಿ ಆಂಗ್ಲ ಶಾಲೆ, ಅಂಬೇಡ್ಕರ್ ನಗರ, ಅರಳಾಳು, ಕನಕಪುರ ತಾಲ್ಲೂಕು, ರಾಮನಗರ ಜಿಲ್ಲೆ. |
| 49 | ಎಸ್.ಎಲ್.ಎನ್. ಹಿರಿಯ ಪ್ರಾಥಮಿಕ ಶಾಲೆ, ಚಿಕ್ಕಮುದವಾಡಿ, ಕನಕಪುರ ತಾಲ್ಲೂಕು, ರಾಮನಗರ ಜಿಲ್ಲೆ |
| 50 | ನಂದಗೋಕುಲ ವಿದ್ಯಾಸಂಸ್ಥೆ, ಹಾರೋಹಳ್ಳಿ |
| 51 | ಶಿವಾನಂದ ಸ್ವಾಮಿ , ಪಾಠ ಶಾಲೆ, ತಾವರೇಕಟ್ಟೆ, ಕೋಡಿಹಳ್ಳಿ.ಕನಕಪುರ ತಾಲ್ಲೂಕು, ರಾಮನಗರ ಜಿಲ್ಲೆ. |
| 52 | ಲಿಂಬಿನ ಗುರುಕುಲ ಕಿರಿಯ ಪ್ರಾಥಮಿಕ ಶಾಲೆ, ಚೀಲೂರು |
| 53 | ನಂದಿ ಕಿರಿಯ ಪ್ರಾಥಮಿಕ ಶಾಲೆ, ನಾರಾಯಣಪುರ, ಹಾರೋಹಳ್ಳಿ ಹೋಬಳಿ, ಕನಕಪುರ ತಾಲ್ಲೂಕು, ರಾಮನಗರ ಜಿಲ್ಲೆ |
| 54 | ಗ್ರೀನ್‌ಬೆಲ್ ಹೈ ಕಿರಿಯ ಪ್ರಾಥಮಿಕ ಶಾಲೆ, ಮೇಡಮಾರನಹಳ್ಳಿ, ಕನಕಪುರ ತಾಲ್ಲೂಕು, ರಾಮನಗರ ಜಿಲ್ಲೆ |
| 55 | ಸ್ಪೂರ್ತಿ ವಿದ್ಯಾನಿಕೇತನ ಕಿರಿಯ ಪ್ರಾಥಮಿಕ ಶಾಲೆ, ಚಿಕ್ಕಸಾದೇನಹಳ್ಳಿ. ಮರಳವಾಡಿ ಹೋಬಳಿ. |
| 56 | ಮಹಿಪಾಲ್ ಪಬ್ಲಿಕ್ ಸ್ಕೂಲ್, ತಟ್ಟೆಕೆರೆ, ಮರಳವಾಡಿ ಹೋಬಳಿ |
| 57 | ಪ್ರಿಯದರ್ಶಿನಿ ಸೇವಾ ಕೇಂದ್ರ, ಹಲಸೂರು, ಸಾತನೂರು ಹೋಬಳಿ, ಕನಕಪುರ ತಾಲ್ಲೂಕು, ರಾಮನಗರ ಜಿಲ್ಲೆ |
| 58 | ಹಂಸವಾಹಿನಿ ಮಕ್ಕಳ ಮಂದಿರ, ಕೋಟೆ ಅಗ್ರಹಾರ ಬೀದಿ, ಕನಕಪುರ ತಾಲ್ಲೂಕು, ರಾಮನಗರ ಜಿಲ್ಲೆ. |
| 59 | ಸಂತ ಥಾಮಸ್ ಹಿರಿಯ ಪ್ರಾಥಮಿಕ ಶಾಲೆ ಕನಕಪುರ ಟೌನ್, ರಾಮನಗರ ಜಿಲ್ಲೆ. |
| 60 | ಜೈನ್ ವಿದ್ಯಾನಿಕೇತನ್, ಜಕ್ಕಸಂದ್ರ ರಸ್ತೆ, ಕನಕಪುರ ತಾಲ್ಲೂಕು, ರಾಮನಗರ ಜಿಲ್ಲೆ |

**ಉಪ ನಿರ್ದೇಶಕರು ವ್ಯತಿರಿಕ್ತ ಷರಾ ನೀಡಿರುವ ಪ್ರಕರಣಗಳಲ್ಲಿ 1 ರಿಂದ 5ನೇ ತರಗತಿ ಆಂಗ್ಲ ಮಾಧ್ಯಮ ಪರಿವರ್ತನೆಗೆ ಪರಿಗಣಿಸಲಾಗಿಲ್ಲ. ಅಂತಹ ಶಾಲೆಗಳ ಪಟ್ಟಿ ಕೆಳಗಿನಂತಿದೆ. ಉಪ ನಿರ್ದೇಶಕರು ರವರು ಈ ಶಾಲೆಗಳ ಕುರಿತಂತೆ ಪೂರಕವಾದ ದಾಖಲೆ ಹಾಗೂ ವರದಿ ಸಲ್ಲಿಸಿದಲ್ಲಿ ಪುನರ್ ಪರಿಶೀಲಿಸಲಾಗುವುದು.**

| ಕ್ರ.ಸಂ. | **1 ರಿಂದ 5ನೇ ತರಗತಿ ಆಂಗ್ಲ ಮಾಧ್ಯಮ ಪರಿವರ್ತನೆಗೆ ಅನುಮತಿ ನೀಡದೇ ಇರುವ ಶಾಲೆಗಳ ಹೆಸರು ಮತ್ತು ವಿಳಾಸ** |
|---|---|
| 1 | ಸ್ನೇಹವೃಕ್ಷ ಇಂಟರ್ ನ್ಯಾಷನಲ್ ಸ್ಕೂಲ್, ಎಣ್ಣೆಗೆರೆ, ಮಾಗಡಿ ತಾಲ್ಲೂಕು, ರಾಮನಗರ ಜಿಲ್ಲೆ. (ಕನಿಷ್ಟ ಹಾಜರಾತಿ ಇರುವುದಿಲ್ಲ) |
| 2 | ನ್ಯೂ ಮಿಲೇಮಿನಿಯಂ ಕಾನ್ವೆಂಟ್, ಚನ್ನಪಟ್ಟಣ ಟೌನ್, ರಾಮನಗರ ಜಿಲ್ಲೆ(ಕನಿಷ್ಟ ಹಾಜರಾತಿ ಇರುವುದಿಲ್ಲ) |
| 3 | ಶ್ರೀ ಮಾರುತಿ ವಿದ್ಯಾ ಮಂದಿರ, ಎಲೇಕೆರೆ, ಚನ್ನಪಟ್ಟಣ ತಾಲ್ಲೂಕು, ರಾಮನಗರ ಜಿಲ್ಲೆ. (ಕನಿಷ್ಟ ಹಾಜರಾತಿ ಇರುವುದಿಲ್ಲ) |
| 4 | ಕೀರ್ತಿ ಪಬ್ಲಿಕ್ ಶಾಲೆ, ಮಂದಾರಗುಪ್ಪೆ, ಚನ್ನಪಟ್ಟಣ ತಾಲ್ಲೂಕು, ರಾಮನಗರ ಜಿಲ್ಲೆ. (ಕನಿಷ್ಟ ಹಾಜರಾತಿ ಇರುವುದಿಲ್ಲ) |

| | |
|---|---|
| 5 | ಸುಪ್ರಿಯಾ ಪ್ರಾಥಮಿಕ ಶಾಲೆ, ನಾಗವಾರ, ಚನ್ನಪಟ್ಟಣ ತಾಲ್ಲೂಕು, ರಾಮನಗರ ಜಿಲ್ಲೆ. (ಕನಿಷ್ಟ ಹಾಜರಾತಿ ಇರುವುದಿಲ್ಲ) |
| 6 | ವಿಜಯ ಪಬ್ಲಿಕ್ ಶಾಲೆ, ಚನ್ನಪಟ್ಟಣ ತಾಲ್ಲೂಕು, ರಾಮನಗರ ಜಿಲ್ಲೆ. (ಕನಿಷ್ಟ ಹಾಜರಾತಿ ಇರುವುದಿಲ್ಲ) |
| 7 | ಬೆನಕ ಕಿರಿಯ ಪ್ರಾಥಮಿಕ ಶಾಲೆ, ಕೊಳಗೊಂಡನಹಳ್ಳಿ, ಕನಕಪುರ ತಾಲ್ಲೂಕು, ರಾಮನಗರ ಜಿಲ್ಲೆ. (ಕನಿಷ್ಟ ಹಾಜರಾತಿ ಇರುವುದಿಲ್ಲ) |
| 8 | ಬೆನಕ ವಿದ್ಯಾಲಯ ಹಿರಿಯ ಪ್ರಾಥಮಿಕ ಶಾಲೆ, ಹೊನ್ನಿಗನಹಳ್ಳಿ, ಸಾತನೂರು ಹೋಬಳಿ, ಕನಕಪುರ ತಾಲ್ಲೂಕು, ರಾಮನಗರ ಜಿಲ್ಲೆ.(ಕನಿಷ್ಟ ಹಾಜರಾತಿ ಇರುವುದಿಲ್ಲ) |
| 9 | ಜಿ.ಕೆ.ಎಂ.ಕಿರಿಯ ಪ್ರಾಥಮಿಕ ಶಾಲೆ, ಹಾರೋಹಳ್ಳಿ, ರಾಮನಗರ ಜಿಲ್ಲೆ.(ಕನಿಷ್ಟ ಹಾಜರಾತಿ ಇರುವುದಿಲ್ಲ) |
| 10 | ಉದಯೋನ್ಮುಖ ವಿದ್ಯಾನಿಕೇತನ, ಪ್ರಾಥಮಿಕ ಶಾಲೆ, ಹಾರೋಹಳಿ, ರಾಮನಗರ ಜಿಲ್ಲೆ.(ಕನಿಷ್ಟ ಹಾಜರಾತಿ ಇರುವುದಿಲ್ಲ) |
| 11 | ವಿದ್ಯಾನಿಕೇತನ, ಕಿರಿಯ ಪ್ರಾಥಮಿಕ ಶಾಲಾ ಕನಕಪುರ ಟೌನ್ ಕನಕಪುರ ತಾಲ್ಲೂಕು, ರಾಮನಗರ ಜಿಲ್ಲೆ (ಕನಿಷ್ಟ ಹಾಜರಾತಿ ಇರುವುದಿಲ್ಲ) |

5/X/15

(ಕೆ.ಎಸ್.ಸತ್ಯಮೂರ್ತಿ)
ಆಯುಕ್ತರು
ಸಾರ್ವಜನಿಕ ಶಿಕ್ಷಣ ಇಲಾಖೆ

5/10/15

ಗೆ,

1. ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ರಾಮನಗರ ಜಿಲ್ಲೆ.
2. ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ.
3. ಸಂಬಂಧಿಸಿದ ಸಂಸ್ಥೆಗಳ ಕಾರ್ಯದರ್ಶಿಗಳಿಗೆ.
4. ಹಿರಿಯ ಸಹಾಯಕ ನಿರ್ದೇಶಕರು ಇ-ಆಡಳಿತ ಸಾರ್ವಜನಿಕ ಶಿಕ್ಷಣ ಇಲಾಖೆ, ಆಯುಕ್ತರ ಕಛೇರಿ, ಬೆಂಗಳೂರು ಇವರು ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಕ್ರಮ ವಹಿಸುವುದು.
5. ಕಛೇರಿ ಪ್ರತಿ.